# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1178 |
| ಸದಸ್ಯರ ಹೆಸರು | : | ಶ್ರೀ ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 28.12.2022 |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| (ಅ) | ಹಾಸನ ಜಿಲ್ಲೆಯ, ಹಾಸನ ತಾಲ್ಲೂಕಿನಲ್ಲಿ 94ಸಿ ಅಡಿಯಲ್ಲಿ ಕಳೆದ 5 ವರ್ಷಗಳಿಂದ ಹಂಚಿಕೆ ಮಾಡಿರುವ ಮನೆಗಳ ಸಂಖ್ಯೆ ಎಷ್ಟು; ಹಾಗೂ ಬಾಕಿ ಉಳಿದಿರುವ ಪ್ರಕರಣಗಳೆಷ್ಟು; (ವಿವರ ನೀಡುವುದು) | ಹಾಸನ ತಾಲ್ಲೂಕಿನಲ್ಲಿ ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಕಲಂ 94ಸಿ ಅಡಿಯಲ್ಲಿ ಕಳೆದ 5 ವರ್ಷಗಳಿಂದ ಸಕ್ರಮಗೊಳಿಸಿರುವ ಮನೆಗಳ ಸಂಖ್ಯೆ: 1444<br>ಬಾಕಿ ಉಳಿದಿರುವ ಪ್ರಕರಣಗಳ ಸಂಖ್ಯೆ: 3973 |
| (ಆ) | ಹಾಸನ ಜಿಲ್ಲೆಯ, ಹಾಸನ ತಾಲ್ಲೂಕಿನಲ್ಲಿ 94ಸಿ ಅಡಿ ಅರ್ಜಿದಾರರಿಗೆ ಮನೆಗಳನ್ನು ಹಂಚಿಕೆ ಮಾಡಲು ಇರುವ ಮಾನದಂಡಗಳೇನು? (ವಿವರ ನೀಡುವುದು) | ದಿನಾಂಕ: 01-01-2005ರ ಪೂರ್ವದಲ್ಲಿ ಗ್ರಾಮಾಂತರ ಪ್ರದೇಶದಲ್ಲಿ ಸರ್ಕಾರಿ ಜಮೀನುಗಳಲ್ಲಿ ಅನಧಿಕೃತವಾಗಿ ನಿರ್ಮಿಸಿರುವ 30x40 ಅಡಿ, 40x60 ಮತ್ತು 50x80 ಅಡಿ ಅಳತೆಯ ವಾಸದ ಮನೆಗಳನ್ನು ಸಕ್ರಮಗೊಳಿಸಲು ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ರ ಕಲಂ 94ಸಿ ಅಡಿಯಲ್ಲಿ ಅವಕಾಶ ಕಲ್ಪಿಸಲಾಗಿದೆ.<br><br>ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94ಸಿ ರಡಿ ಸಲ್ಲಿಸಿದ ಅರ್ಜಿಗಳಿಗೆ ಸಂಬಂಧಿಸಿದ ಪೂರಕ ದಾಖಲೆಗಳನ್ನು ನಿಗದಿಪಡಿಸಿದ ದಿನಾಂಕದಂದು ಹಾಜರು ಪಡಿಸಲು ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 108(ಆರ್) ರ ಮೇರೆಗೆ ನಮೂನೆ-ಬಿ ಯಲ್ಲಿ ತಹಶೀಲ್ದಾರರು ನೋಟೀಸ್ ನೀಡಬೇಕಾಗುತ್ತದೆ. ಅಲ್ಲದೆ ಗ್ರಾಮಸ್ಥರ ಸಮ್ಮುಖದಲ್ಲಿ ವಿಚಾರಣೆ ನಡೆಸಲು ದಿನಾಂಕ |

| | | |
|---|---|---|
| | | ನಿಗದಿಪಡಿಸಿ ಸಾರ್ವಜನಿಕ ಪ್ರಕಟಣೆಯನ್ನು ಸ್ಥಳೀಯ ಸಂಸ್ಥೆಗಳ ಸೂಚನಾ ಫಲಕದಲ್ಲಿ ಪ್ರಚುರ ಪಡಿಸಬೇಕಾಗಿರುತ್ತದೆ. ವಿಚಾರಣೆ ಪೂರ್ಣಗೊಂಡ ನಂತರ ಅರ್ಹ ಪ್ರಕರಣಗಳಲ್ಲಿ ನಿಯಮಾನುಸಾರ ಆದೇಶ ಹೊರಡಿಸಿ ಸಾಗುವಳಿ ಚೀಟಿ ನೀಡಲು ಕ್ರಮವಹಿಸಲಾಗುತ್ತಿದೆ. |

(ಕಡತ ಸಂಖ್ಯೆ:ಕಂಇ 80 ಎಲ್‌ಜಿಹೆಚ್ 2022)

**(ಆರ್.ಅಶೋಕ)**
ಕಂದಾಯ ಸಚಿವರು